# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 634 (683) |
| ಸದಸ್ಯರ ಹೆಸರು | : | ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 19.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕರ್ನಾಟಕ ಆಯುರ್ವೇದ ಯುನಾನಿ ವೈದ್ಯ ಮಂಡಳಿಯ ಹಿಂದಿನ ನೋಂದಣಾಧಿಕಾರಿಗಳು ಅಧಿಕಾರ ದುರುಪಯೋಗಪಡಿಸಿಕೊಂಡು ಮಂಡಳಿಯ ನಿಯಮಗಳನ್ನು ಉಲ್ಲಂಘಿಸಿ ಕಾನೂನು ಬಾಹಿರವಾಗಿ ಅರ್ಹರಲ್ಲದ ವ್ಯಕ್ತಿಗಳಿಗೆ ವೈದ್ಯ ವೃತ್ತಿ ನಡೆಸಲು ಅನುಕೂಲ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಬಂದಿದ್ದಲ್ಲಿ, ಇಲಾಖೆಯ ತಾಂತ್ರಿಕ ಸಮಿತಿಯ ವರದಿಯಂತೆ ಸದರಿಯವರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸೇವೆಯಿಂದ ವಜಾಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಯಲ್ಲಿ ನೋಂದಣಿಗೆ ಅರ್ಹರಲ್ಲದ 13 ವ್ಯಕ್ತಿಗಳ ಹೆಸರುಗಳು ಕೆ.ಎ.ಯು.ಪಿ. ಮೂಲ ನೋಂದಣಿ ವಹಿಯಲ್ಲಿ ದಾಖಲಾಗಿರುವ ಬಗ್ಗೆ ಇಲಾಖಾ ತಾಂತ್ರಿಕ ಸಮಿತಿಯು ವರದಿಯನ್ನು ಆಯುಕ್ತರು, ಆಯುಷ್ ಇಲಾಖೆ ಇವರಿಗೆ ಸಲ್ಲಿಸಿದ್ದು, ಸದರಿ ವರದಿಯಲ್ಲಿನ ಅಂಶಗಳ ಆಧಾರದ ಮೇಲೆ ಸಂಬಂಧಿಸಿದ ನೋಂದಣಾಧಿಕಾರಿಗಳ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಆಕುಕ 275 ಪಿಐಎಂ 2022**

**(ಡಾ: ಕೆ.ಸುಧಾಕರ್)**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು